ಅಭಿವೃದ್ಧಿ ಕಾಮಗಾರಿಗಳು ಹಾಗೂ ರೂ.1.19 ಕೋಟಿ ಅಂದಾಜು ಮೊತ್ತದ 45 ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ.

799 ಶ್ರೀ ಮಹದೇವಪ್ರಸಾದ್ ಹೆಚ್.ಎಸ್.(ಗುಂಡ್ಲುಪೇಟೆ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್‌ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಂಡ್ಲುಪೇಟೆ ತಾಲ್ಲೂಕಿನ 139 ಗ್ರಾಮಗಳಿಗೆ ಹಾಗೂ ಚಾಮರಾಜನಗರ ತಾಲ್ಲೂಕಿನ 168 ಗ್ರಾಮಗಳಿಗೆ ಕಾವೇರಿ ನದಿಯಿಂದ ಶುದ್ಧ ಕುಡಿಯುವ ನೀರು ಒದಗಿಸುವ ಯೋಜನೆ ಸರ್ಕಾರದ ಮುಂದಿದೆಯೇ;

ಆ) ಈ ಯೋಜನೆಯನ್ನು ಸರ್ಕಾರ ಶೀಘ್ರ ಅನುಷ್ಠಾನಕ್ಕೆ ತರಲು ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು)?

ಕು.ಶೋಭಾ ಕರಂದ್ಲಾಜೆ(ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್‌ಸಚಿವರು):

ಅ) ಹೌದು.

ಆ) ದಿನಾಂಕ: 18–10–2006ರಂದು ನಡೆದ ರಾಜ್ಯ ಮಟ್ಟದ ಎಂಪವರ್ಡ್ ಸಮಿತಿ ಸಭೆಯಲ್ಲಿ, ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ದೃಷ್ಟಿಯಿಂದ, ಚಾಮರಾಜನಗರ ತಾಲ್ಲೂಕಿನ 166 ಗ್ರಾಮಗಳ ರೂ.60.95 ಕೋಟಿ ಅಂದಾಜಿನ ಹಾಗೂ ಗುಂಡ್ಲುಪೇಟೆ ತಾಲ್ಲೂಕಿನ 131 ಗ್ರಾಮಗಳ ರೂ.42.00 ಕೋಟಿ ಅಂದಾಜಿನ ಪ್ರಾಂತೀಯ ಕುಡಿಯುವ ನೀರು ಸರಬರಾಜು ಯೋಜನೆಗಳಿಗೆ ತಾತ್ವಿಕ ಅನುಮೋದನೆಗೆ ನೀಡಲಾಗಿದೆ. ಹೆಚ್ಚುವರಿ ಅನುದಾನ ಬಿಡುಗಡೆಗಾಗಿ ಭಾರತ ಸರ್ಕಾರಕ್ಕೆ ಮಾಡಿದ ವಿಶೇಷ ಪ್ರಸ್ತಾವನೆಗೆ ಒಪ್ಪಿಗೆ ದೊರೆತಿಲ್ಲ. ಆದುದರಿಂದ, ಈ ಬೃಹತ್ ಯೋಜನೆಗಳನ್ನು ಅನುದಾನದ ಲಭ್ಯತೆ ಆಧರಿಸಿ ಹಂತಹಂತವಾಗಿ ಅನುಷ್ಠಾನಗೊಳಿಸಲು ಪರಿಶೀಲಿಸಲಾಗುವುದು.

1141 ಶ್ರೀ ಸಿದ್ದು ಸವದಿ (ತೇರದಾಳ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉದ್ಯೋಗ ಖಾತ್ರಿ ಯೋಜನೆಯಲ್ಲಿ ಮಂಜೂರಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು;

ಆ) ಈ ಅನುದಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಮಾರ್ಗಸೂಚಿಯಲ್ಲಿ ಬದಲಾವಣೆ ಮಾಡಲು ಇರುವ ತೊಂದರೆಗಳೇನು;